## ಕರ್ನಾಟಕ ವಿಧಾನಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 132(152) |
| ಸದಸ್ಯರ ಹೆಸರು : | ಶ್ರೀ ಮಧು ಜಿ. ಮಾದೇಗೌಡ (ಪದವೀದರರಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 13-02-2024 |
| ಉತ್ತರಿಸುವವರು : | ಪೌರಾಡಳಿತ ಮತ್ತು ಹಜ್ ಸಚಿವರು |

| ಅ.ನಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಮತ್ತು ಮಹಾನಗರಪಾಲಿಕೆ ವ್ಯಾಪ್ತಿಯ ಸರ್ಕಾರಿ ಸ್ಥಳಗಳಲ್ಲಿ, ಧ್ವಜಸ್ತಂಭ, ಪ್ರತಿಮೆ ಮತ್ತು ಪುತ್ಥಳಿ ಸ್ಥಾಪಿಸಲು ಖಾಸಗಿ ಸಂಸ್ಥೆಗಳಿಗೆ ಅನುಮತಿ ನೀಡುವ ಸಕ್ಷಮ ಪ್ರಾಧಿಕಾರ ಯಾವುದು: (ಸರ್ಕಾರ ಈ ಬಗ್ಗೆ ಹೊರಡಿಸಿರುವ ಪ್ರಸ್ತುತ ಚಾಲ್ತಿಯಲ್ಲಿರುವ ಸುತ್ತೋಲೆ, ಆದೇಶ ಪತ್ರಗಳನ್ನು ನೀಡುವುದು) | ಘನ ಸರ್ವೋಚ್ಚ ನ್ಯಾಯಾಲಯವು SLP(C) No: 8519/2016 ದಿನಾಂಕ: 01/18/2013ರಲ್ಲಿ ಸರ್ಕಾರದ/ಸಾರ್ವಜನಿಕ ಜಾಗದಲ್ಲಿ ಯಾವುದೇ ಪ್ರತಿಮೆ/ಪುತ್ಥಳಿ ನಿರ್ಮಿಸಲು ರಾಜ್ಯ ಸರ್ಕಾರಗಳು ಅನುಮತಿ ನೀಡಬಾರದೆಂದು ತೀರ್ಪು ನೀಡಿರುತ್ತದೆ. ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆಯ ಸುತ್ತೋಲೆ ಸಂಖ್ಯೆ: ಕಸಂವಾಪ್ರ 564 ಕಸಧ 2012 ದಿನಾಂಕ:11-06-2012ರಲ್ಲಿ ಸರ್ಕಾರದ/ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನನಾಯಕರ, ಸ್ವತಂತ್ರ್ಯ ಹೋರಾಟಗಾರರ ಅಥವಾ ಗಣ್ಯವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ.<br><br>ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಪೌನಿ/ಜಿಪಿಎಸ್/ ಪ್ರತಿಮೆ/ನಾಮ;ಸಿಆರ್/2012-13, ದಿನಾಂಕ: 17.12.2012ರಲ್ಲಿಯೂ ಸಹ ಸರ್ಕಾರ/ಸಾರ್ವಜನಿಕ ಜಾಗದಲ್ಲಿ ಯಾವುದೇ ಗಣ್ಯವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಸ್ಥಳಗಳಲ್ಲಿ ಧ್ವಜಸ್ಥಂಭ, ಪ್ರತಿಮೆ ಮತ್ತು ಪುತ್ಥಳಿ ಸ್ಥಾಪಿಸಲು ಖಾಸಗಿ ಸಂಸ್ಥೆಗಳಿಗೆ ಅನುಮತಿ ನೀಡುವ ಅಧಿಕಾರವು ಗ್ರಾಮ ಪಂಚಾಯಿತಿಗಳಿಗೆ ಇರುವುದಿಲ್ಲ. |
| ಆ) | ಒಂದು ವೇಳೆ ಸಕ್ಷಮ ಪ್ರಾಧಿಕಾರವಲ್ಲದೇ ಮೇಲೆ ತಿಳಿಸಲಾದ ಸಂಸ್ಥೆಗಳು ಸಭೆಯ ಸರ್ವಾನುಮತದ ನಿರ್ಣಯದ ಮೇಲೆ ತೀರ್ಮಾನ ತೆಗೆದುಕೊಂಡು ಧ್ವಜಸ್ತಂಭ, ಪ್ರತಿಮೆ ಮತ್ತು ಪುತ್ಥಳಿಗಳ ಸ್ಥಾಪನೆಗೆ ಅನುಮತಿ ನೀಡಿದರೆ ಊರ್ಜಿತವೇ ಅಥವಾ ಇಲ್ಲವೇ (ವಿವರವಾದ ಮಾಹಿತಿ ನೀಡುವುದು) | |
| ಇ) | ಸಕ್ಷಮ ಪ್ರಾಧಿಕಾರವು ಸರ್ಕಾರಿ ಸ್ಥಳಗಳಲ್ಲಿ ಧ್ವಜಸ್ತಂಭ, ಪ್ರತಿಮೆ ಮತ್ತು ಪುತ್ಥಳಿಗಳ ಸ್ಥಾಪನೆಗೆ ಖಾಸಗಿ ಸಂಸ್ಥೆಗಳಿಗೆ ಅನುಮತಿ ನೀಡುವಾಗ ಅನುಸರಿಸಬೇಕಾದ ಮಾನದಂಡಗಳಾವುವು: (ಸರ್ಕಾರದ ಆದೇಶದ ಪ್ರತಿಯನ್ನು ಒದಗಿಸುವುದು) | ಸಂಘ ಸಂಸ್ಥೆಗಳು ಪ್ರತಿಮೆಯ ನಿರ್ಮಾಣಕ್ಕೆ ಮುಂದೆ ಬಂದಲ್ಲಿ, ಪ್ರಾಥಮಿಕವಾಗಿ ಸಂಘ ಸಂಸ್ಥೆಗಳು ತಮಗೆ ಸೇರಿದ ನಿವೇಶನದಲ್ಲಿ ಪ್ರತಿಮೆ ನಿರ್ಮಿಸುವ ಹಾಗೂ ಅವುಗಳ ಭದ್ರತೆ ಹಾಗೂ ನಿರ್ವಹಣೆಯ ಬಗ್ಗೆ ಮುಚ್ಚಳಿಕೆ ಪತ್ರ ನೀಡಿದ್ದಲ್ಲಿ, ಪ್ರತಿಮೆ ನಿರ್ಮಾಣ ಮಾಡಲು ಮಂಜೂರಾತಿ ನೀಡಲು ಅವಕಾಶವಿದ್ದು, ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾಧಿಕಾರಿ ಮುಖಾಂತರ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕಾಗಿರುತ್ತದೆ. |
| ಈ) | ಸರ್ಕಾರಿ ಸ್ಥಳಗಳಲ್ಲಿ ಸ್ಥಾಪಿಸಲಾದ ಧ್ವಜ ಸ್ತಂಭಗಳಲ್ಲಿ ರಾಷ್ಟ್ರಧ್ವಜವನ್ನಷ್ಟೇ ಹಾರಿಸಬೇಕೆ ಅಥವಾ ಬೇರೆ ಯಾವುದಾದರೂ ಧ್ವಜವನ್ನು ಹಾರಿಸಲು ಅವಕಾಶವಿದೇಯೇ? (ವಿವರನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 116 ಜಿಪಸ 2013(ಪಿ1) ದಿನಾಂಕ: 30.7.2013ರಲ್ಲಿ ನಿರಂತರವಾಗಿ ಪ್ರತೀ ದಿನ ನಿಯಮಾನುಸಾರ ರಾಷ್ಟ್ರಧ್ವಜವನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಕಛೇರಿಗಳ ಆವರಣದ ಧ್ವಜ ಸ್ತಂಬದ ಮೇಲೆ ಹಾರಿಸಲು ತಿಳಿಸಲಾಗಿದೆ.<br><br>ಧ್ವಜ ಸ್ತಂಭಗಳನ್ನು ಸ್ಥಾಪಿಸಲು ನಗರಾಭಿವೃದ್ಧಿ ಇಲಾಖೆಯಿಂದ ಅನುಮತಿ ನೀಡುತ್ತಿರುವುದಿಲ್ಲ. |

ಸಂಖ್ಯೆ: ನಅಇ 39 ಜಿಇಎಲ್ 2024(ಇ)

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು.